## **ಕರ್ನಾಟಕ ವಿಧಾನ ಪರಿಷತ್ತು**

ಸದಸ್ಯರ ಹೆಸರು : ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 280 (307)

ಉತ್ತರಿಸಬೇಕಾದ ದಿನಾಂಕ : 19.08.2026

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ ಜಿಲ್ಲೆ ಹುಮನಾಬಾದ ತಾಲ್ಲೂಕಿನ ಹುಣಸಗೇರಾ ಮತ್ತು ಮೊಳಕೇರಾ ಗ್ರಾಮದಲ್ಲಿ ಜೆ.ಜೆ.ಎಂ. ಕಾಮಗಾರಿ ಕಳಪೆ ಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; | ಬೀದರ ಜಿಲ್ಲೆ ಹುಮನಾಬಾದ ತಾಲ್ಲೂಕಿನ ಹುಣಸಗೇರಾ ಮತ್ತು ಮೊಳಕೇರಾ ಗ್ರಾಮದಲ್ಲಿ ಜೆ.ಜೆ.ಎಂ. ಕಾಮಗಾರಿ ಕಳಪೆ ಮಟ್ಟದಿಂದ ಕೂಡಿರುವುದು ದೂರಿನ ಮುಖಾಂತರ ಸರ್ಕಾರದ ಗಮನಕ್ಕೆ ಬಂದಿದ್ದು, ಸದರಿ ಕಾಮಗಾರಿಗಳನ್ನು ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಕಲಬುರಗಿರವರ ತಂಡದ ಸ್ಥಳ ಪರಿವೀಕ್ಷಣಾ ವರದಿಯಂತೆ ವಿವರಗಳು ಈ ಕೆಳಕಂಡಂತಿವೆ<br><br>➢ ಬೀದರ್ ಜಿಲ್ಲೆ, ಹುಮನಾಬಾದ್ ತಾಲ್ಲೂಕಿನ **ಹುಣಸಗೇರಾ** ಗ್ರಾಮದ ಜನರಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಜಲ ಜೀವನ್ ಮಿಷನ್ (JJM) ಯೋಜನೆಯಡಿ ಏಕ ಗ್ರಾಮ ಕುಡಿಯುವ ನೀರಿನ ಯೋಜನೆ (SVS) ಕಾಮಗಾರಿಯನ್ನು ಭೌತಿಕವಾಗಿ ಪೂರ್ಣಗೊಳಿಸಲಾಗಿದೆ. ಎಲ್ಲಾ ಕಾರ್ಯಾತ್ಮಕ ನಳ ಸಂಪರ್ಕಗಳ ಮೂಲಕ ಸಮರ್ಪಕವಾಗಿ ನೀರು ಸರಬರಾಜಾಗುತ್ತಿರುವುದನ್ನು ಖಚಿತಪಡಿಸಿಕೊಂಡ ನಂತರ ಗ್ರಾಮವನ್ನು "ಹರ್ ಘರ್ ಜಲ್" ಎಂದು ಘೋಷಿಸಿ, ಮುಂದಿನ ಕಾರ್ಯಾಚರಣೆ ಹಾಗೂ ನಿರ್ವಹಣೆಗಾಗಿ ಸಂಬಂಧಪಟ್ಟ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತ್ ಕನಕಟ್ಟ ರವರಿಗೆ ದಿನಾಂಕ 21.01.2026 ರಂದು ಕಾಮಗಾರಿಯನ್ನು ಹಸ್ತಾಂತರಿಸಲಾಗಿದೆ.<br>➢ ಬೀದರ್ ಜಿಲ್ಲೆ, ಹುಮನಾಬಾದ್ ತಾಲ್ಲೂಕಿನ **ಮೊಳಕೇರಾ** ಗ್ರಾಮದ ಜನರಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಜಲ ಜೀವನ್ ಮಿಷನ್ (JJM) ಯೋಜನೆಯಡಿ ಏಕ ಗ್ರಾಮ ಕುಡಿಯುವ ನೀರಿನ ಯೋಜನೆ (SVS) ಕಾಮಗಾರಿಯನ್ನು ಭೌತಿಕವಾಗಿ ಶೇ.90ರಷ್ಟು ಪೂರ್ಣಗೊಳಿಸಲಾಗಿದೆ. ಓವರ್‌ಹೆಡ್ ಟ್ಯಾಂಕ್ (OHT) ನಿಂದ ವಿತರಣಾ ಕೊಳವೆ ಮಾರ್ಗದ ಮೂಲಕ ಕಾರ್ಯಾತ್ಮಕ ನಳ ಸಂಪರ್ಕಗಳಿಗೆ ನೀರು ಸರಬರಾಜು ಮಾಡಲು ರಾಷ್ಟ್ರೀಯ ಹೆದ್ದಾರಿ-65ಕ್ಕೆ ಅಡ್ಡಲಾಗಿ ಪೈಪ್‌ಲೈನ್ ಕ್ರಾಸಿಂಗ್ ಮಾಡಬೇಕಾಗಿರುತ್ತದೆ. ಆದರೆ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ಅಗತ್ಯ ಅನುಮತಿ ಪಡೆಯುವಲ್ಲಿ ವಿಳಂಬವಾಗಿರುವುದರಿಂದ ಕಾಮಗಾರಿಯಲ್ಲಿ ವಿಳಂಬ ಉಂಟಾಗಿರುತ್ತದೆ.<br><br>ಈ ಹಿನ್ನೆಲೆಯಲ್ಲಿ, ಪರ್ಯಾಯ ಮಾರ್ಗವಾಗಿ ರಾಷ್ಟ್ರೀಯ ಹೆದ್ದಾರಿಗೆ ಈಗಾಗಲೇ ಅಡ್ಡಲಾಗಿ ನಿರ್ಮಿಸಿರುವ ಹಳೆಯ Culvert Drain ಮೂಲಕ ಪೈಪ್‌ಲೈನ್ ಅಳವಡಿಸಲು ಸಂಬಂಧಪಟ್ಟ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಮಾಣಿಕನಗರ ರವರು ಅನುಮತಿ ನೀಡಿರುವುದರಿಂದ, ಬಾಕಿ ಉಳಿದಿದ್ದ ವಿತರಣಾ ಕೊಳವೆ ಮಾರ್ಗ (Distribution Pipeline) ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ. |

| | | |
|---|---|---|
| | | ಪ್ರಸ್ತುತ, ಮೊಳಕೇರಾ ಗ್ರಾಮದಲ್ಲಿ ಬಾಕಿ ಉಳಿದಿರುವ ಕಾಮಗಾರಿಯನ್ನು ಕಾರ್ಯಪಾಲಕ ಅಭಿಯಂತರರ ವರದಿಸಿದಂತೆ ದಿನಾಂಕ 31.03.2027ರೊಳಗಾಗಿ ಪೂರ್ಣಗೊಳಿಸಲಾಗುವುದು. ಗ್ರಾಮವನ್ನು "ಹರ್ ಘರ್ ಜಲ್" ಎಂದು ಘೋಷಿಸಿ, ಮುಂದಿನ ಕಾರ್ಯಾಚರಣೆ ಹಾಗೂ ನಿರ್ವಹಣೆಗಾಗಿ ಸಂಬಂಧಪಟ್ಟ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಮಾಣಿಕನಗರ ಗ್ರಾಮ ಪಂಚಾಯಿತಿ ರವರಿಗೆ ಕಾಮಗಾರಿಯನ್ನು ಹಸ್ತಾಂತರಿಸಲಾಗುವುದು. |
| ಆ | ಕಳಪೆ ಮಟ್ಟದಲ್ಲಿ ಕಾಮಗಾರಿ ಮಾಡಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಇಲ್ಲಿಯವರೆಗೆ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು? (ಮಾಹಿತಿ ನೀಡುವುದು) | ಬೀದರ್ ಜಿಲ್ಲೆ, ಹುಮನಾಬಾದ್ ತಾಲ್ಲೂಕಿನ **ಹುಣಸಗೇರಾ** ಗ್ರಾಮದ ಎಲ್ಲಾ ಮನೆಗಳಿಗೆ ಸಂಬಂಧಪಟ್ಟ ಗ್ರಾಮ ಪಂಚಾಯತ್ ಕನಕಟ್ಟ ವತಿಯಿಂದ ಪ್ರಸ್ತುತ ಕುಡಿಯುವ ನೀರನ್ನು ಪೂರೈಸಲಾಗುತ್ತಿದೆ. ಸದರಿ ಕಾಮಗಾರಿಯ ಗುತ್ತಿಗೆದಾರರಿಗೆ ಅಂತಿಮ ಬಿಲ್ಲನ್ನು ಇದುವರೆಗೆ ಪಾವತಿಸಿರುವುದಿಲ್ಲ. ಪ್ರಸ್ತುತ ಸದರಿ ಕಾಮಗಾರಿಯು ದೋಷನಿರ್ವಹಣಾ ಅವಧಿ (DLP) ಯಲ್ಲಿದ್ದು, ದಿನಾಂಕ 21.01.2026 ರಿಂದ 20.01.2027 ರವರೆಗೆ ಯಾವುದೇ ನ್ಯೂನತೆಗಳು ಕಂಡುಬಂದಲ್ಲಿ, ಸಂಬಂಧಪಟ್ಟ ಗುತ್ತಿಗೆದಾರರಿಂದ ಅವುಗಳನ್ನು ಸರಿಪಡಿಸಲಾಗುತ್ತಿದೆ.<br><br>**ಮೊಳಕೇರಾ** ಗ್ರಾಮದಲ್ಲಿನ ಕುಡಿಯುವ ನೀರಿನ ಕಾಮಗಾರಿಯು ಪ್ರಗತಿಯಲ್ಲಿದ್ದು, ಬಾಕಿ ಉಳಿದಿರುವ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಲಾಗುವುದು. ಎಲ್ಲಾ ಕಾರ್ಯಾತ್ಮಕ ನಳ ಸಂಪರ್ಕಗಳ ಮೂಲಕ ಸಮರ್ಪಕವಾಗಿ ನೀರು ಸರಬರಾಜಾಗುತ್ತಿರುವುದನ್ನು ಖಚಿತಪಡಿಸಿಕೊಂಡ ನಂತರವೇ ಗ್ರಾಮವನ್ನು "ಹರ್ ಘರ್ ಜಲ್" ಎಂದು ಘೋಷಿಸಿ, ಮುಂದಿನ ಕಾರ್ಯಾಚರಣೆ ಹಾಗೂ ನಿರ್ವಹಣೆಗಾಗಿ ಗ್ರಾಮ ಪಂಚಾಯಿತಿಗೆ ಕಾಮಗಾರಿಯನ್ನು ಹಸ್ತಾಂತರಿಸಬೇಕಾಗಿದೆ.<br><br>ಪ್ರಸ್ತುತ ವಿವರವಾದ ಪರಿವೀಕ್ಷಣಾ ವರದಿಯು ಪರಿಶೀಲನಾ ಹಂತದಲ್ಲಿದ್ದು, ಕಾಮಗಾರಿಗಳನ್ನು ಕಳಪೆ ಗುಣಮಟ್ಟದಲ್ಲಿ ಕೈಗೊಂಡಿರುವುದು ಪರಿಶೀಲನೆಯಿಂದ ದೃಢಪಟ್ಟಲ್ಲಿ, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ:RDWSD/CE/TECH/220/2026-27, ದಿನಾಂಕ: 17.08.2026

(ಈಶ್ವರ್ ಬಿ ಖಂಡ್ರೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಸಚಿವರು.